# ಕರ್ನಾಟಕ ವಿಧಾನ ಪರಿಷತ್ತು

| | |
|---|---|
| **ಚುಕ್ಕೆ ಗುರುತಿಲ್ಲದ ಪ್ರಶ್ನೆ ಸಂಖ್ಯೆ:** | 293 (310) |
| **ಸದಸ್ಯರ ಹೆಸರು:** | ಶ್ರೀ ಸಿ.ಎನ್.ಮಂಜೇಗೌಡ (ಸ್ಥಳೀಯ ಸಂಸ್ಥೆಗಳಿಂದ ಚುನಾಯಿತರಾದವರು) |
| **ಉತ್ತರಿಸಬೇಕಾದ ಸಚಿವರು** | ಮಾನ್ಯ ಕಂದಾಯ ಸಚಿವರು |
| **ಉತ್ತರಿಸಬೇಕಾದ ದಿನಾಂಕ:** | 21.12.2022 |

| ಕ್ರ. ಸಂ. | ಪ್ರಶ್ನೆ | ಉತ್ತರ |
|---|---|---|
| ಅ) | ಕಂದಾಯ ಇಲಾಖೆಗೆ ಸರ್ಕಾರದಿಂದ ಮಂಜೂರಾಗಿರುವ ಗ್ರೇಡ್-2 ತಹಶೀಲ್ದಾರ್ ಹುದ್ದೆಗಳ ಒಟ್ಟು ಸಂಖ್ಯೆ ಎಷ್ಟು; ಈ ಹುದ್ದೆಗಳನ್ನು ಎಷ್ಟು ವರ್ಷಗಳ ಹಿಂದೆ ಸೃಜಿಸಲಾಗಿದೆ; (ಸಂಪೂರ್ಣ ಅಂಕಿ ಅಂಶಗಳೊಂದಿಗೆ ಮಾಹಿತಿ ನೀಡುವುದು) | ಕಂದಾಯ ಇಲಾಖೆಯಲ್ಲಿ ಮಂಜೂರಾಗಿರುವ ತಹಶೀಲ್ದಾರ್ ಗ್ರೇಡ್-2 ಹುದ್ದೆಗಳ ವಿವರಗಳನ್ನು ಇದರೊಂದಿಗೆ ಲಗತ್ತಿಸಲಾದ ಅನುಬಂಧದಲ್ಲಿ ನೀಡಲಾಗಿದೆ. |
| ಆ) | ಮಂಜೂರಾದ ಗ್ರೇಡ್-2 ತಹಶೀಲ್ದಾರ್ ಹುದ್ದೆಗಳಲ್ಲಿ ನೇರ ನೇಮಕಾತಿಯಿಂದ ಭರ್ತಿ ಮಾಡುವ ಹುದ್ದೆಗಳ ಸಂಖ್ಯೆ ಎಷ್ಟು; ಈ ನೇರ ನೇಮಕಾತಿ ಹುದ್ದೆಗಳಲ್ಲಿ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; ಈ ಹುದ್ದೆಗಳನ್ನು ಯಾವಾಗ ನೇಮಕಾತಿ ಮಾಡಲಾಗುವುದು; (ಸಂಪೂರ್ಣ ಮಾಹಿತಿ ನೀಡುವುದು.) | ಕಂದಾಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ತಹಶೀಲ್ದಾರ್ ಗ್ರೇಡ್-2 ವೃಂದದ ಒಟ್ಟು ಹುದ್ದೆಗಳಲ್ಲಿ ಶೇ.50ರಷ್ಟು ಹುದ್ದೆಗಳನ್ನು ನೇರ ನೇಮಕಾತಿಯಿಂದ ಭರ್ತಿ ಮಾಡಬೇಕಾಗಿರುತ್ತದೆ.<br><br>ಪ್ರಸ್ತುತ ನೇರ ನೇಮಕಾತಿ ಹುದ್ದೆಗಳಲ್ಲಿ 97 ಅಧಿಕಾರಿಗಳು ಕರ್ತವ್ಯ ನಿರ್ವಹಿಸುತ್ತಿದ್ದು, 2011 ಮತ್ತು 2020ನೇ ಬ್ಯಾಚ್‌ನ ಗೆಜೆಟೆಡ್ ಪ್ರೊಬೇಷನರ್ಸ್ ತಹಶೀಲ್ದಾರ್ ಗ್ರೇಡ್-2 ವೃಂದದ ಒಟ್ಟು 80 ಅಭ್ಯರ್ಥಿಗಳಿಗೆ ನೇಮಕಾತಿ ಆದೇಶ ನೀಡುವ ಪೂರ್ವದಲ್ಲಿ ಸದರಿಯವರುಗಳ ಶೈಕ್ಷಣಿಕ ವಿದ್ಯಾರ್ಹತೆ, ಜಾತಿ ಪ್ರಮಾಣ ಪತ್ರಗಳ ನೈಜತೆ ಬಗ್ಗೆ ಸಿಂಧುತ್ವ ಪ್ರಮಾಣ ಪತ್ರ ಪಡೆಯಲು ಹಾಗೂ ಸದರಿ ಅಭ್ಯರ್ಥಿಗಳ ಪೂರ್ವಚಾರಿತ್ರ್ಯದ ಬಗ್ಗೆ ಪೊಲೀಸ್ ಇಲಾಖೆಯಿಂದ ವರದಿ ಪಡೆಯಲು ಕ್ರಮವಹಿಸಲಾಗುತ್ತಿದೆ.<br><br>ಪ್ರಸ್ತುತ ತಹಶೀಲ್ದಾರ್ ಗ್ರೇಡ್-2 ವೃಂದದ 98 ನೇರ ನೇಮಕಾತಿ ಹುದ್ದೆಗಳು ಖಾಲಿ ಇರುತ್ತವೆ. ಪ್ರಾದೇಶಿಕ ಆಯುಕ್ತರ ಕಛೇರಿಗಳನ್ನು ರದ್ದುಪಡಿಸಲು ಮಾನ್ಯ ಸಚಿವ ಸಂಪುಟ ಉಪ ಸಮಿತಿಯು ತೀರ್ಮಾನಿಸಿದ್ದು, ಈ ನಿಟ್ಟಿನಲ್ಲಿ ಕೆಲವು ಹುದ್ದೆಗಳು ರದ್ದಾಗುವುದರಿಂದ ಈ ಎಲ್ಲಾ ಬೆಳವಣಿಗೆಗಳ ತೀರ್ಮಾನವಾದ ನಂತರ ನಿಯಮಾನುಸಾರ ಪರಿಶೀಲಿಸಲಾಗುವುದು. |
| ಇ) | ಮುಂಬಡ್ತಿ ಮೂಲಕ ಭರ್ತಿ ಮಾಡಲು ಕಾಯ್ದಿರಿಸಿದ ಗ್ರೇಡ್-2 ತಹಶೀಲ್ದಾರ್ ಹುದ್ದೆಗಳ ಸಂಖ್ಯೆ ಎಷ್ಟು? ಹಾಗೂ ಮುಂಬಡ್ತಿ ಹುದ್ದೆಗಳಲ್ಲಿ ಗ್ರೇಡ್-2 ತಹಶೀಲ್ದಾರ್ ಖಾಲಿ ಇರುವ ಹುದ್ದೆಗಳ ಸಂಖ್ಯೆ ಎಷ್ಟು; (ಅಂಕಿ ಅಂಶಗಳೊಂದಿಗೆ ಸರ್ಕಾರಿ ಆದೇಶ / ಅಧಿಸೂಚನೆಗಳ ಪ್ರತಿಯೊಂದಿಗೆ ಮಾಹಿತಿ ನೀಡುವಂತೆ) | ಕಂದಾಯ ಇಲಾಖೆಯ ವೃಂದ ಮತ್ತು ನೇಮಕಾತಿ ನಿಯಮಗಳನ್ವಯ ತಹಶೀಲ್ದಾರ್ ಗ್ರೇಡ್-2 ವೃಂದದ ಒಟ್ಟು ಹುದ್ದೆಗಳಲ್ಲಿ ಶೇ.50ರಷ್ಟು ಹುದ್ದೆಗಳನ್ನು ಮುಂಬಡ್ತಿ ಮೂಲಕ ಭರ್ತಿ ಮಾಡಬೇಕಾಗಿರುತ್ತದೆ.<br><br>ಪ್ರಸ್ತುತ ತಹಶೀಲ್ದಾರ್ ಗ್ರೇಡ್-2 ವೃಂದದಲ್ಲಿ 88 ಮುಂಬಡ್ತಿ ಹುದ್ದೆಗಳು ಖಾಲಿ ಇರುತ್ತವೆ. |

ಸಂಖ್ಯೆ: ಕಂಇ **558** ಎಎಸ್‌ಡಿ **2022**

(ಆರ್. ಅಶೋಕ)
ಕಂದಾಯ ಸಚಿವರು

## ಅನುಬಂಧ

**ಕಂದಾಯ ಇಲಾಖೆಗೆ ಸರ್ಕಾರದಿಂದ ಮಂಜೂರಾಗಿರುವ ತಹಶೀಲ್ದಾರ್ ಗ್ರೇಡ್-2 ಹುದ್ದೆಗಳ ಮಾಹಿತಿ ಈ ಕೆಳಕಂಡಂತಿರುತ್ತದೆ**

i)

| ಕ್ರ. ಸಂ. | ಹುದ್ದೆಗಳ ವಿವರ | ಹುದ್ದೆಗಳ ಸಂಖ್ಯೆ |
|---|---|---|
| 1 | ಸರ್ಕಾರದ ಆದೇಶ ಸಂಖ್ಯೆ:ಕಂಇ 249 ಎಎಸ್‌ಡಿ 2016, ದಿ:27.06.2016 | 594 |
| 2 | ಕಂಇ 35 ಭೂದಾಪು 2017, ದಿ:17.01.2018ರ ಪ್ರಕಾರ ಹೊಸ ತಾಲ್ಲೂಕುಗಳ ಸೃಜನೆಯಲ್ಲಿ ಸೃಜಿಸಿದ ಹುದ್ದೆಗಳು | 40 |
| 3 | ಕಂಇ 30 ಎಲ್‌ಆರ್‌ಡಿ 2020 ದಿ:29.06.2021 ರ ಪ್ರಕಾರ ದಾವಣಗೆರೆ ಜಿಲ್ಲೆಯ ಹೊನ್ನಾಳಿ ಹೊಸ ಕಂದಾಯ ಉಪವಿಭಾಗಾಧಿಕಾರಿ ಕಛೇರಿಯಲ್ಲಿ ಸೃಜಿಸಿದ ಹುದ್ದೆ | 01 |
| 4 | ನೂತನವಾಗಿ ಸೃಜೆಯಾದ ವಿಜಯನಗರ ಜಿಲ್ಲೆಗೆ ಸೃಜನೆಯಾದ ತಹಶೀಲ್ದಾರ್ ಗ್ರೇಡ್-2 ಹುದ್ದೆಗಳು | 04 |
| 5 | ದೂಷಿತ ಕಂಪನಿಗಳಾದ ಕಣ್ವ ಬ್ಯಾಂಕ್ ಮತ್ತು ಐ.ಎಂ.ಎ. ಗೆ ತಲಾ 02 ಹುದ್ದೆಗಳು | 04 |
| 6 | ವಾಣಿಜ್ಯ ಮತ್ತು ಕೈಗಾರಿಕೆ ಸಚಿವಾಲಯದ ತಾಂತ್ರಿಕ ಕೋಶದಲ್ಲಿ ಸೃಜನೆಯಾದ ತಹಶೀಲ್ದಾರ್ ಗ್ರೇಡ್-2 ಹುದ್ದೆ | 01 |
| 7 | ಲಂಬಾಣಿ ತಾಂಡಾ ಮತ್ತು ಕಂದಾಯ ಗ್ರಾಮ ರಚಿಸಲು ಸೃಜನೆಯಾದ ವಿಶೇಷ ಕೋಶದಲ್ಲಿ ತಹಶೀಲ್ದಾರ್ ಗ್ರೇಡ್-2 ಹುದ್ದೆ | 01 |
| | **ಒಟ್ಟು** | **645** |

ii) ನಗರಾಭಿವೃದ್ಧಿ ಇಲಾಖೆಯ ಅ.ಟಿ. ಸಂ: ನಅಇ 41 ಟಿಎಂಇ 2021, ದಿನಾಂಕ:22.06.2022 ರನ್ವಯ ತಹಶೀಲ್ದಾರ್ ಗ್ರೇಡ್-2 ಗ್ರೇಡ್-2 ವೃಂದದ 96 ನಿಯೋಜನೆ ಮತ್ತು ತಾತ್ಕಾಲಿಕ ಹುದ್ದೆಗಳು ಇರುವುದಿಲ್ಲ ಎಂದು ತಿಳಿಸಲಾಗಿರುತ್ತದೆ. ಆದ್ದರಿಂದ ಪ್ರಸ್ತುತ ತಹಶೀಲ್ದಾರ್ ಗ್ರೇಡ್-2 ವೃಂದದಲ್ಲಿ 550 ಹುದ್ದೆಗಳಿಗೆ ಮಾತ್ರ ಪರಿಗಣಿಸಲಾಗುತ್ತಿದೆ.

iii) ಈ ಮಧ್ಯೆ ರಾಯಚೂರು ಜಿಲ್ಲೆಯ ಅರಕೇರಾ ತಾಲ್ಲೂಕಿಗೆ ಹೊಸದಾಗಿ ತಹಶೀಲ್ದಾರ್ ಗ್ರೇಡ್-1 ಮತ್ತು ತಹಶೀಲ್ದಾರ್ ಗ್ರೇಡ್-2 ಹುದ್ದೆಗಳನ್ನು ಸೃಜಿಸಲಾಗಿದ್ದು, ಮೇಲಿನ ವಿವರಗಳಂತೆ ಒಟ್ಟು 551 ತಹಶೀಲ್ದಾರ್ ಗ್ರೇಡ್-2 ಹುದ್ದೆಗಳೆಂದು ಪರಿಗಣಿಸಲಾಗಿದೆ.